ಅಫಜಲಪುರ ತಾಲ್ಲೂಕಿನಲ್ಲಿ ಪ್ರಾಥಮಿಕ ಶಾಲಾ ಕಟ್ಟಡಗಳ ಮಂಜೂರಾತಿ

೧೨೬೨. ಶ್ರೀ ಮಾಲೀಕಯ್ಯ ಗುತ್ತೇದಾರ್ (ಅಫಜಲಪುರ).— ಮಾನ್ಯ ಪ್ರಾಥಮಿಕ ಹಾಗೂ ವಯಸ್ಕರ ಶಿಕ್ಷಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಅಫಜಲ್‌ಪುರ ತಾಲ್ಲೂಕಿನಲ್ಲಿ ಆರ್.ಎಲ್.ಇ.ಜಿ.ಪಿ. ಯೋಜನೆಯನ್ವಯ ೩೫ ಶಾಲಾ ಕಟ್ಟಡಗಳ ಮಂಜೂರಾತಿಗಾಗಿ ಗುಲ್ಬರ್ಗ ಜಿಲ್ಲಾಧಿಕಾರಿಗಳು ಶಿಫಾರಸ್ಸು ಮಾಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಸರ್ಕಾರದವರು ಈ ಬಗ್ಗೆ ಯಾವ ಕ್ರಮಗಳನ್ನು ತೆಗೆದುಕೊಂಡಿದ್ದಾರೆ ?

ಶ್ರೀ ಹೆಚ್. ಜಿ. ಗೋವಿಂದೇಗೌಡ(ಪ್ರಾಥಮಿಕ ಹಾಗೂ ವಯಸ್ಕರ ಶಿಕ್ಷಣ ರಾಜ್ಯ ಮಂತ್ರಿಗಳು)

ಅ) ಬಂದಿದೆ.

ಆ) ೧೯೮೪-೮೫ ಮತ್ತು ೧೯೮೫-೮೬ನೇ ಸಾಲಿನಲ್ಲಿ ಆರ್.ಎಲ್.ಇ.ಜಿ.ಪಿ. ಯೋಜನೆಗೆ ಹಣ ಒದಗಿಸಿಲ್ಲವಾದ್ದರಿಂದ ಕಟ್ಟಡ ನಿರ್ಮಿಸಲು ಸಾಧ್ಯವಾಗಿಲ್ಲ.

ಧಾರವಾಡದಲ್ಲಿರುವ ಕೃಷಿ ಕಾಲೇಜಿನಲ್ಲಿ 'ಅರಣ್ಯ' ವಿಷಯವನ್ನು ಪ್ರಾರಂಭಿಸುವುದು

೧೩೨೮. ಶ್ರೀ ಕೆ. ಬಿ. ಕೋಳಿವಾಡ (ರಾಣೆಬೆನ್ನೂರು).— ಮಾನ್ಯ ಕೃಷಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಧಾರವಾಡದಲ್ಲಿರುವ ಕೃಷಿ ಕಾಲೇಜಿನಲ್ಲಿ 'ಅರಣ್ಯ' ವಿಷಯವು ಪ್ರಾರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಇಲ್ಲದಿದ್ದಲ್ಲಿ ಅದನ್ನು ಪ್ರಾರಂಭಿಸುವ ಬಗ್ಗೆ ಇರುವ ತೊಂದರೆ ?

ಶ್ರೀ ಎಂ. ಪಿ. ಪ್ರಕಾಶ್ (ಕೃಷಿ ಮಂತ್ರಿಗಳು).—

ಅ) ಹೌದು. ಕೃಷಿ ಕಾಲೇಜಿನಲ್ಲಿ ಶೈಕ್ಷಣಿಕ ವರ್ಷ ೧೯೮೫-೮೬ ರಿಂದ ನಾಲ್ಕು ವರ್ಷದ ಬಿ.ಎಸ್.ಸಿ. (ಅರಣ್ಯ) ಡಿಪ್ಲೋಮಾ ಕೋರ್ಸನ್ನು ಕೃಷಿ ವಿಶ್ವವಿದ್ಯಾನಿಲಯವು ಪ್ರಾರಂಭಿಸಲು ಸರ್ಕಾರದ ಒಪ್ಪಿಗೆಯನ್ನು ಕೃಷಿ ವಿಶ್ವವಿದ್ಯಾನಿಲಯಕ್ಕೆ ಈಗಾಗಲೇ ತಿಳಿಸಲಾಗಿದೆ.

ಆ) ಉದ್ಭವಿಸುವುದಿಲ್ಲ.

ರಾಣೆಬೆನ್ನೂರು ನಗರದಲ್ಲಿ ಪ್ರಾಥಮಿಕ ಶಾಲೆಗಳನ್ನು ಕಟ್ಟಿಸುವುದು

೧೩೦೬. ಶ್ರೀ ಕೆ. ಬಿ. ಕೋಳಿವಾಡ (ರಾಣೆಬೆನ್ನೂರು).—ಮಾನ್ಯ ಪ್ರಾಥಮಿಕ ಹಾಗೂ ವಯಸ್ಕರ ಶಿಕ್ಷಣ ರಾಜ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

(ಅ) ರಾಣೆಬೆನ್ನೂರು ನಗರ ಹಾಗೂ ಗ್ರಾಮಾಂತರ ಪ್ರದೇಶದಲ್ಲಿರುವ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ಹಾಗೂ ಈ ಎರಡೂ ಪ್ರದೇಶಗಳಲ್ಲಿರುವ ಶಿಕ್ಷಕರ ಸಂಖ್ಯೆ ಎಷ್ಟು ?

(ಆ) ನಗರ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಮಂಜೂರಾಗಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ?

(ಇ) ನಗರ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಮಂಜೂರಾತಿ ಮಾಡಬೇಕಾಗಿರುವ ಶಿಕ್ಷಕರ ಸಂಖ್ಯೆ ಎಷ್ಟು ?

(ಈ) ನಗರ ಹಾಗೂ ಗ್ರಾಮಾಂತರ ಪ್ರದೇಶದಲ್ಲಿರುವ ಪ್ರಾಥಮಿಕ ಶಾಲೆಗಳಲ್ಲಿ ಸ್ವಂತ ಕಟ್ಟಡಗಳ ಸಂಖ್ಯೆ ಎಷ್ಟು ? ಬಾಡಿಗೆ ಕಟ್ಟಡಗಳ ಸಂಖ್ಯೆ ಎಷ್ಟು ?

(ಉ) ೧೯೮೫-೮೬ನೇ ಸಾಲಿನ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಪ್ರಾಥಮಿಕ ಶಾಲೆಗಳಿಗೆ ಕಟ್ಟಬೇಕಾಗಿರುವ ಕೊಠಡಿಗಳ ಸಂಖ್ಯೆ ಎಷ್ಟು ?

(ಊ) ಖಾಲಿ ಇರುವ ಶಿಕ್ಷಕರ ಹುದ್ದೆ ಮತ್ತು ಶಾಲಾ ಕಟ್ಟಡಗಳನ್ನು ಕಟ್ಟಿಸಲು ಸರ್ಕಾರವು ಕೈಗೊಂಡ ಕ್ರಮವೇನು ?